**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ.208/2024</u>**

| | | |
|---|---|---|
| ಸಾಕ್ಷಿದಾರರ ಹೆಸರು | : ಲತಾ | ಪ್ರಾಸಾ-6 |
| ಗಂಡನ ಹೆಸರು | : ಕಾಂತರಾಜು | ಚಾಸಾ-7 |
| ವಯಸ್ಸು | : 53 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವ್ಯಾಪಾರ | ದಿನಾಂಕಃ 09.09.2025 |
| ವಾಸಸ್ಥಳ | : ಭದ್ರಾವತಿ | |

**<u>:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-1 ರವರ ಪರಿಚಯ ನನಗಿಲ್ಲ. ಚಾಸಾ-7, 8 ಮತ್ತು 5 ರವರು ನಮ್ಮ ಊರಿನವರಾಗಿರುತ್ತಾರೆ.

ದಿ.07.07.2023 ರಂದು ನಾವು ಧರ್ಮಸ್ಥಳಕ್ಕೆಂದು ಭದ್ರಾವತಿಯಿಂದ ಸರ್ಕಾರಿ ಬಸ್ ನಲ್ಲಿ ಪ್ರಯಾಣಿಸುತ್ತಿರುತ್ತೇವೆ, ಸದರಿ ಸಮಯದಲ್ಲಿ ನನ್ನೊಟ್ಟಿಗೆ ಚಾಸಾ-5, 6, 8 ಮತ್ತು 9 ರವರು ಪ್ರಯಾಣಿಸುತ್ತಿರುತ್ತಾರೆ. ಆ ದಿನ ಭದ್ರಾವತಿಯಿಂದ ಬೆ.11.00 ರ ಸಮಯಕ್ಕೆ ಧರ್ಮಸ್ಥಳಕ್ಕೆಂದು ಹೊರಟಿದ್ದು 3.00 ಗಂಟೆಯಷ್ಟರಲ್ಲಿ ಚಾರ್ಮಡಿ ಘಾಟ್ ಗೆ ತಲುಪಿರುತ್ತೇನೆ. ಸದರಿ ರಸ್ತೆಯ ಮಾರ್ಗದಲ್ಲಿ ಎದುರಿನಿಂದ ಅತಿವೇಗ ಮತ್ತು ಅಜಾಗ್ರುಕತೆಯಿಂದ ಬಂದಂತಹ ಇನ್ನೊಂದು ಸರ್ಕಾರಿ ಬಸ್ ನಾವು ಪ್ರಯಾಣಿಸುತ್ತಿದ್ದ ಬಸ್ ಗೆ ಡಿಕ್ಕಿ ಹೊಡೆದ ಪರಿಣಾಮ ನನ್ನ ಎಡಗೈ, ಕಾಲು, ಮಂಡಿ ಮತ್ತು ಸೊಂಟಕ್ಕೆ ತೀರ್ವ ಸ್ವರೂಪದ ಗಾಯಗಳಾಗಿರುತ್ತವೆ. ಗಾಯಾಳುಗಳನ್ನು ಯಾರೋ ಸಾರ್ವಜನಿಕರು ಖಾಸಗಿ ಆಸ್ಪತ್ರೆಗೆ ದಾಖಲು ಮಾಡಿರುತ್ತಾರೆ ಸದರಿ ಆಸ್ಪತ್ರೆಯ ಹೆಸರು ನನಗೆ ತಿಳಿದಿರುವುದಿಲ್ಲ ನಂತರ ಅಲ್ಲಿಂದ ನಮ್ಮನ್ನು ಸರ್ಕಾರಿ ಆಸ್ಪತ್ರೆಗೆ ವರ್ಗಾಯಿಸಿರುತ್ತಾರೆ. ನಂತರ ಅಲ್ಲಿಯೂ ಚಿಕಿತ್ಸೆ ನೀಡಲಾಗುವುದಿಲ್ಲ ಎಂದು ತಿಳಿಸಿದ ಕಾರಣ ನಾವು ಭದ್ರಾವತಿಗೆ ತೆರಳಿ ಅಲ್ಲಿಯೇ ಚಿಕಿತ್ಸೆಯನ್ನು ಪಡೆದುಕೊಂಡಿರುತ್ತೇವೆ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಷಯ ತಿಳಿದಿರುವುದಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಷಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ದಿ.07.07.2023 ರಂದು ನಾನು ಭದ್ರಾವತಿಯಿಂದ ಧರ್ಮಸ್ಥಳಕ್ಕೆ KA-21-F-0215 ಎಂಬ ಸರ್ಕಾರಿ ಬಸ್ ನ್ನು ಹತ್ತಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ. ಸದರಿ ಬಸ್ ನಲ್ಲಿ ಮ.3.00 ರ ಸಮಯಕ್ಕೆ ಚಾರ್ಮಡಿ ಘಾಟ್ ಗೆ ತಲುಪಿರುತ್ತೇನೆ ಮತ್ತು ಸದರಿ ರಸ್ತೆಯ ಮದ್ಯದಲ್ಲಿ ಎದುರಿನಿಂದ

ಬಂದಂತಹ KA-17-F-1901 ಎಂಬ ಬಸ್ ನಮ್ಮ ಬಸ್ ಗೆ ಡಿಕ್ಕಿ ಹೊಡೆದಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ. ನಾನು ಪ್ರಯಾಣಿಸುತ್ತಿದ್ದ ಬಸ್ ನ ಚಾಲಕ ಬಸ್ ನ್ನು ಅತಿವೇಗ ಮತ್ತು ಅಜಾಗ್ರತೆಯಿಂದ ಬಸ್ ನ್ನು ಚಲಾಯಿಸುತ್ತಿದ್ದರು ಎಂದರೆ ಸಾಕ್ಷಿಯು ಎದುರಿನಿಂದ ಬಂದ ಬಸ್ ನಮ್ಮ ಬಸ್ ಗೆ ಡಿಕ್ಕಿ ಹೊಡೆದಿರುತ್ತದೆ ಎಂದು ನುಡಿಯುತ್ತಾರೆ. ನಾನು ಆ ದಿನ ಪ್ರಯಾಣಿಸುತ್ತಿದ್ದ ಬಸ್ ನ್ನು ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿಯು ಚಲಾಯಿಸುತ್ತಿದ್ದರು ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ನನ್ನೊಟ್ಟಿಗೆ ಇದ್ದ ಚಾಸಾ-5, 6 ಮತ್ತು 9 ರವರಿಗೂ ಗಾಯಗಳಾಗಿರುತ್ತವೆ ಎಂದರೆ ಸರಿ. ನಂತರ ನಮ್ಮಗಳನ್ನು ಮೂಡಿಗೆರೆ ಯ ಸರ್ಕಾರಿ ಆಸ್ಪತ್ರೆಗೆ ಆ್ಯಂಬುಲೆನ್ಸ್ ಮುಖಾಂತರ ಕರೆದೊಯ್ಯಲಾಗಿರುತ್ತದೆ ಎಂದರೆ ಸರಿ. ಸದರಿ ಅಪಘಾತದ ಬಾಬ್ತು ಚಾಸಾ-1 ರವರು ಪೋಲಿಸ್ ಠಾಣೆಯಲ್ಲಿ ದೂರನ್ನು ದಾಖಲಿಸಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿ.15.07.2023 ರಂದು ಸಾಕ್ಷಿಯು ತಾನು ಪೋಲಿಸರು ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದು ನುಡಿದ ಕಾರಣ ಸದರಿ ಹೇಳಿಕೆಯ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು.

ಸಾಕ್ಷಿಯು 2 ಫೋಟೋಗಳನ್ನು ತೋರಿಸಲಾಗಿ ಅದರಲ್ಲಿ ಕಂಡುಬರುವ ಬಸ್ ಗಳನ್ನು ಈ ಹಿಂದೆ ಎಂದೂ ನೋಡಿರುವುದಿಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ,**
**ಮೂಡಿಗೆರೆ**
**ಸಿ.ಸಿ.208/2024**

| | | |
|---|---|---|
| ಸಾಕ್ಷಿದಾರರ ಹೆಸರು | : ದೇವಮ್ಮ | ಪ್ರಾಸಾ-7 |
| ಗಂಡನ ಹೆಸರು | : ಕೃಷ್ಣಾನಾಯಕ್ | ಚಾಸಾ-4 |
| ವಯಸ್ಸು | : 48 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 09.09.2025 |
| ವಾಸಸ್ಥಳ | : ಹುಣುಸೂರು | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-2, 3, 5 ರಿಂದ 10 ರವರ ಪರಿಚಯ ನನಗಿಲ್ಲ.

ಕಳೆದ 2 ವರ್ಷದ ಹಿಂದೆ ನಾನು ಹುಬ್ಬಳ್ಳಿಯಿಂದ ಧರ್ಮಸ್ಥಳಕ್ಕೆಂದು ಸರ್ಕಾರಿ ಬಸ್ ನಲ್ಲಿ ಪ್ರಯಾಣಿಸುತ್ತಿರುತ್ತೇವೆ. ಸದರಿ ಬಸ್ ನ್ನು ಬೆಳಗಿನ ಜಾವ 5.00 ಕ್ಕೆ ಹೊರಟ್ಟಿದ್ದು, ಮ.3.00 ಗಂಟೆಯಷ್ಟರಲ್ಲಿ ಚಾರ್ಮಡಿ ಘಾಟ್ ಗೆ ತಲುಪಿರುತ್ತೇನೆ. ಸದರಿ ರಸ್ತೆಯ ಮಾರ್ಗದಲ್ಲಿ ಎದುರಿನಿಂದ ಅತಿವೇಗ ಮತ್ತು ಅಜಾಗ್ರಕತೆಯಿಂದ ಬಂದಂತಹ ಇನ್ನೊಂದು ಸರ್ಕಾರಿ ಬಸ್ ನಾವು ಪ್ರಯಾಣಿಸುತ್ತಿದ್ದ ಬಸ್ ಗೆ ಡಿಕ್ಕಿ ಹೊಡೆದಿರುತ್ತದೆ. ಸದರಿ ಸಮಯದಲ್ಲಿ ನಾನು ಮಲಗಿದ್ದ ಕಾರಣ ಏನಾಯಿತು ಎಂದು ನನಗೆ ತಿಳಿದಿರುವುದಿಲ್ಲ. ಸದರಿ ಅಪಘಾತದಿಂದ ನನಗೆ ಪ್ರಜ್ಞೆಯಿಲ್ಲದ ಕಾರಣ ನನಗೆ ಪ್ರಜ್ಞೆ ಬಂದ ಸಮಯದಲ್ಲಿ ನನ್ನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಸದರಿ ಅಪಘಾತದಲ್ಲಿ ನನ್ನ ತಲೆಗೆ ಪೆಟ್ಟಾಗಿರುತ್ತದೆ. ನಾನು ಆಸ್ಪತ್ರೆಯಲ್ಲಿ ಇದ್ದ ಸಮಯದಲ್ಲಿ ಪೋಲಿಸರು ನನಗೆ ಕರೆ ಮಾಡಿ ಪ್ರಕರಣದ ಬಗ್ಗೆ ಕೇಳಿರುತ್ತಾರೆ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಷಯ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಷಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.07.07.2023 ರಂದು ನಾನು ಹುಬ್ಬಳ್ಳಿಯಿಂದ ಧರ್ಮಸ್ಥಳಕ್ಕೆ KA-21-F-0215 ಎಂಬ ಸರ್ಕಾರಿ ಬಸ್ ನ್ನು ಹತ್ತಿರುವ ಬಗ್ಗೆ ನನಗೆ ತಿಳಿದಿರುವುದಿಲ್ ಸದರಿ ಬಸ್ ನ್ನು ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿಯು ಚಲಾಯಿಸುತ್ತಿದ್ದರು ಎಂದರೆ ಸರಿಯಲ್ಲ. ಮತ್ತು ನಾನು ಪ್ರಯಾಣಿಸುತ್ತಿದ್ದ ಬಸ್ ಅತಿವೇಗ ಮತ್ತು ಅಜಾಗ್ರಕತೆಯಿಂದ ಚಲಾಯಿಸಿದ ಕಾರಣ ಎದುರಿನಿಂದ ಬಂದ ಇನ್ನೊಂದು ಸರ್ಕಾರಿ ಬಸ್ ಗೆ ಡಿಕ್ಕಿ ಹೊಡೆಯಲಾಗಿತ್ತು ಎಂದರೆ ಸರಿಯಲ್ಲ. ಈ ಪ್ರಕರಣದ ಕುರಿತು ಚಾಸಾ-1 ರವರು ದೂರನ್ನು ದಾಖಲಿಸಿರುವ ಬಗ್ಗೆ ಯಾರೋ ಕಾರೆ ಮಾಡಿ

ತಿಳಿಸಿರುತ್ತಾರೆ. ಸಾಕ್ಷಿಯು 2 ಫೋಟೋಗಳನ್ನು ತೋರಿಸಲಾಗಿ ಅದರಲ್ಲಿ ಕಂಡುಬರುವ ಬಸ್ ಗಳನ್ನು ಈ ಹಿಂದೆ ಎಂದೂ ನೋಡಿರುವುದಿಲ್ಲ ಎಂದು ನುಡಿಯುತ್ತಾರೆ. ದಿ.10.07.2023 ರಂದು ಸಾಕ್ಷಿಯು ತಾನು ಪೋಲಿಸರು ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದು ನುಡಿದ ಕಾರಣ ಸದರಿ ಹೇಳಿಕೆಯ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.